**National**
**Kannada**
**17.12.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಜೈಪುರದಲ್ಲಿಂದು ೪೬ ಸಾವಿರದ ೩೦೦ ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

೨. ಸಂವಿಧಾನದಿಂದಾಗಿಯೇ ಭಾರತದಲ್ಲಿ ಪ್ರಜಾಪ್ರಭುತ್ವ ಸುಭದ್ರವಾಗಿ ನೆಲೆಯೂರಿದೆ - ರಾಜ್ಯಸಭೆಯಲ್ಲಿ ಸಚಿವ ಅಮಿತ್ ಶಾ ಅಭಿಮತ

೩. ಭಾರತ ಕೈಗೆಟಕುವ ವೈದ್ಯಕೀಯ ಪ್ರವಾಸೋದ್ಯಮದ ಕೇಂದ್ರವಾಗಿ ಹೊರಹೊಮ್ಮಿದೆ- ರಾಷ್ಟ್ರಪತಿ ದ್ರೌಪದಿ ಮುರ್ಮು

೪. ರೈತರ ಆದಾಯ ಹೆಚ್ಚಿಸಲು ಸರ್ಕಾರದಿಂದ ಆರು ಅಂಶಗಳ ಕಾರ್ಯತಂತ್ರ - ಸಚಿವ ಶಿವರಾಜ್ ಸಿಂಗ್ ಚೌಹಾಣ್

೫. ಮಹಿಳಾ ಟಿ-೨೦ ಕ್ರಿಕೆಟ್; ಮುಂಬೈನಲ್ಲಿಂದು ಭಾರತ- ವೆಸ್ಟ್ ಇಂಡೀಸ್ ಮುಖಾಮುಖಿ

**<><*<><>*><>**

ಜೈಪುರದಲ್ಲಿಂದು ಪ್ರಸ್ತುತ ರಾಜಸ್ಥಾನ ಸರ್ಕಾರ ಒಂದು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿದರು. ಈ ಸಂದರ್ಭದಲ್ಲಿ ಅವರು ೪೬ ಸಾವಿರದ ೩೦೦ ಕೋಟಿ ರೂಪಾಯಿ ಮೌಲ್ಯದ ಇಂಧನ, ರಸ್ತೆ, ರೈಲ್ವೆ ಮತ್ತು ನೀರಾವರಿಗೆ ಸಂಬಂಧಿಸಿದ ೨೪ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜಸ್ಥಾನದ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರದ ಬದ್ಧವಾಗಿದೆ. ರಾಜ್ಯದ ಪ್ರಗತಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಚಾಲಕ ಶಕ್ತಿಯಾಗಿ ಕಾರ್ಯ ನಿರ್ವಹಿಸುತ್ತಿದೆ.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

ಈ ಕಾರ್ಯಕ್ರಮದಲ್ಲಿ ರಾಜಸ್ಥಾನ ಮತ್ತು ಮಧ್ಯಪ್ರದೇಶದ ಮುಖ್ಯಮಂತ್ರಿಗಳೂ ಭಾಗವಹಿಸಿದ್ದರು.

**<><*<><>*><>**

ರಾಜ್ಯಸಭೆಯಲ್ಲಿಂದು ಭಾರತ ಸಂವಿಧಾನದ ೭೫ ವರ್ಷಗಳ ವೈಭವೋಪೇತ ಪಯಣದ ಕುರಿತು ಎರಡನೇ ದಿನದ ವಿಶೇಷ ಚರ್ಚೆ ಮುಂದುವರೆಯಿತು. ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಭಾರತೀಯ ಸಂವಿಧಾನದಿಂದಲೇ ದೇಶ ತೀವ್ರಗತಿಯ ಪ್ರಗತಿ ಕಾಣುತ್ತಿದೆ. ನಮ್ಮ ಸಂವಿಧಾನದ ಮೂಲಭೂತ ತತ್ವಗಳಿಂದಾಗಿ ೭೫ ವರ್ಷಗಳಲ್ಲಿ ಪ್ರಜಾಪ್ರಭುತ್ವ ಭಾರತದಲ್ಲಿ ಸುಭದ್ರವಾಗಿ ನೆಲೆಯೂರಿದೆ. ಹಾಗೆಯೇ ಸಂವಿಧಾನದ ಚೌಕಟ್ಟನ್ನು ಮೀರಿ ಅದನ್ನು ಉಲ್ಲಂಘಿಸಲು ಪ್ರಯತ್ನಿಸಿದ್ದಲ್ಲಿ ಆಗುವಂತಹ ಅನಾಹುತಗಳನ್ನು ದೇಶ ಕಂಡಿದೆ ಎಂದರು. ಇದಕ್ಕೂ ಮುನ್ನ

ಸಭಾನಾಯಕ ಮತ್ತು ಕೇಂದ್ರ ಸಚಿವ ಜಗತ್ ಪ್ರಕಾಶ್ ನಡ್ಡಾ, ಭಾರತವು ಕೇವಲ ಅತಿದೊಡ್ಡ ಪ್ರಜಾಪ್ರಭುತ್ವವಲ್ಲ, ಆದರೆ ಪ್ರಜಾಪ್ರಭುತ್ವದ ತಾಯಿ. ಭಾರತೀಯ ತತ್ವದ ಪ್ರಕಾರ, ಪ್ರಜಾಪ್ರಭುತ್ವವು ಸ್ವಾತಂತ್ರ್ಯ, ಸ್ವೀಕಾರಾರ್ಹತೆ, ಸಮಾನತೆ ಮತ್ತು ಒಳಗೊಳ್ಳುವಿಕೆಯನ್ನು ಒಳಗೊಂಡಿರುತ್ತದೆ ಎಂದರು. ಟಿಎಂಸಿಯ ಸುಶ್ಮಿತಾ ದೇವ್ ಮಾತನಾಡಿ, ದೇಶದ ಶೇಕಡಾ ೪೦ ರಷ್ಟು ಸಂಪತ್ತನ್ನು ಶೇಕಡ ೧ ರಷ್ಟು ಜನಸಂಖ್ಯೆ ನಿಯಂತ್ರಿಸುತ್ತಿದೆ. ಮಣಿಪುರ ವಿಷಯದಲ್ಲಿ ಸರ್ಕಾರ ಮೌನವಾಗಿದೆ ಎಂದು ಆರೋಪಿಸಿದರು. ಜೆಡಿಯು ನಾಯಕ ಮತ್ತು ಕೇಂದ್ರ ಸಚಿವ ರಾಮ್ ನಾಥ್ ಠಾಕೂರ್ ಅವರು ಪ್ರತಿಪಕ್ಷ ಕಾಂಗ್ರೆಸ್, ತುರ್ತು ಪರಿಸ್ಥಿತಿಯನ್ನು ಹೇರಿ ಸಂವಿಧಾನದ ಮೇಲೆ ದಾಳಿ ನಡೆಸಿತ್ತು ಎಂದರು. ಕಳೆದ ಲೋಕಸಭೆಯಲ್ಲಿ ಅಂಗೀಕಾರವಾದ ೨೨೧ ಮಸೂದೆಗಳು ಚರ್ಚೆಯಿಲ್ಲದೆ ಅಥವಾ ಒಂದು ಗಂಟೆಗೂ ಕಡಿಮೆ ಅವಧಿಯ ಚರ್ಚೆಯ ಮೂಲಕ ಅಂಗೀಕಾರ ಮಾಡಲಾಗಿದೆ ಎಂದು ಡಿಎಂಕೆ ಸಂಸದ ಪಿ ವಿಲ್ಸನ್ ಅಸಮಾಧಾನ ವ್ಯಕ್ತಪಡಿಸಿದರು. ಚರ್ಚೆಯಲ್ಲಿ ಕೇಂದ್ರ ಸಚಿವ ಭೂಪೇಂದರ್ ಯಾದವ್, ಸಿಪಿಐ(ಎಂ)ನ ಜಾನ್ ಬ್ರಿಟ್ಟಾಸ್, ಎಎಪಿಯ ಸಂಜಯ್ ಸಿಂಗ್, ಕಾಂಗ್ರೆಸ್‌ನ ಸೈಯದ್ ನಸೀರ್ ಹುಸೇನ್, ಟಿಎಂಸಿಯ ಮಮತಾ ಠಾಕೂರ್, ಆರ್‌ಜೆಡಿ ಸಂಸದ ಮನೋಜ್ ಝಾ, ಹಿರಿಯ ಜೆಡಿಎಸ್ ನಾಯಕ ಮತ್ತು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಸೇರಿದಂತೆ ಇತರರು ಚರ್ಚೆಯಲ್ಲಿ ಭಾಗವಹಿಸಿದ್ದರು.

**<><*<><>*><>**

ಭಾರತ, ಕೈಗೆಟಕುವ ವೈದ್ಯಕೀಯ ಪ್ರವಾಸೋದ್ಯಮದ ಕೇಂದ್ರವಾಗಿ ಹೊರಹೊಮ್ಮುತ್ತಿದ್ದು, ಈ ಪ್ರಗತಿಯಲ್ಲಿ ವೈದ್ಯರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದ್ದಾರೆ. ಆಂಧ್ರಪ್ರದೇಶದ ಏಮ್ಸ್ ಮಂಗಳಗಿರಿಯ ಘಟಿಕೋತ್ಸವ ಸಮಾರಂಭದಲ್ಲಿಂದು ಮಾತನಾಡಿದ ಅವರು, ಮನುಕುಲಕ್ಕೆ ಸೇವೆ ಸಲ್ಲಿಸಲು ವೈದ್ಯ ವೃತ್ತಿಯು ಒಂದು ಮಾರ್ಗವಾಗಿದೆ. ಸೇವಾ ದೃಷ್ಟಿಕೋನ, ನಿರಂತರ ಕಲಿಕೆ ಮತ್ತು ಸಂಶೋಧನೆಯತ್ತ ವೈದ್ಯರು ಗಮನ ಹರಿಸುವಂತೆ ಸಲಹೆ ನೀಡಿದರು. ಸಮಗ್ರ ಆರೋಗ್ಯದ ಮಹತ್ವವನ್ನು ಒತ್ತಿ ಹೇಳಿದ ಅವರು, ಏಮ್ಸ್ ಮಂಗಳಗಿರಿಯ ಧ್ಯೇಯವಾಕ್ಯವಾದ 'ಸಕಲ ಸ್ವಾಸ್ಥ್ಯ ಸರ್ವದಾ'ವನ್ನು ಶ್ಲಾಘಿಸಿದರು. ಏಮ್ಸ್ ಮಂಗಳಗಿರಿಯಲ್ಲಿರುವ ಸೈಟೋಜೆನೆಟಿಕ್ಸ್ ಪ್ರಯೋಗಾಲಯ ನವೀನ ಸಂಶೋಧನೆ ಮತ್ತು ಪರಿಹಾರಗಳತ್ತ ಒಂದು ಮಹತ್ವದ ಹೆಜ್ಜೆಯಾಗಿದೆ. ಚಿಕಿತ್ಸೆಗಳು ಮತ್ತು ವೈದ್ಯಕೀಯ ವಿಜ್ಞಾನದಲ್ಲಿ ಈ ಸಂಸ್ಥೆಯು ಪ್ರವರ್ತಕ ಪ್ರಗತಿಯನ್ನು ಸಾಧಿಸಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಎಸ್.ಅಬ್ದುಲ್ ನಜೀರ್, ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವ ಪ್ರತಾಪ್ ರಾವ್ ಜಾಧವ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

'ಒಂದು ರಾಷ್ಟ್ರ ಒಂದು ಚುನಾವಣೆ'ಗೆ ಸಂಬಂಧಿಸಿದ ಎರಡು ಮಸೂದೆಗಳನ್ನು ಇಂದು ಲೋಕಸಭೆಯಲ್ಲಿ ಮಂಡಿಸಲಾಯಿತು. ಸಂವಿಧಾನ ೧೨೯ ತಿದ್ದುಪಡಿ ಮಸೂದೆ ೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳ ತಿದ್ದುಪಡಿ ಮಸೂದೆ ೨೦೨೪ ಅನ್ನು ಸದನದಲ್ಲಿ ಮಂಡಿಸುವ ಪ್ರಸ್ತಾವನೆಯನ್ನು ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್, ಕೈಗೆತ್ತಿಕೊಳ್ಳುತ್ತಿದ್ದಂತೆಯೇ ಪ್ರತಿಪಕ್ಷಗಳು ಅದನ್ನು ಮತಕ್ಕೆ ಹಾಕಲು ಒತ್ತಾಯಿಸಿದರು. ೨೬೯ ಸದಸ್ಯರು ವಿಧೇಯಕ ಮಂಡನೆ ಪರವಾಗಿ ಮತ ಚಲಾಯಿಸಿದರೆ, ೧೯೮ ಸದಸ್ಯರು ವಿರುದ್ಧವಾಗಿ ಮತ

ಚಲಾಯಿಸಿದರು. ಕಾಂಗ್ರೆಸ್, ಟಿಎಂಸಿ, ಸಮಾಜವಾದಿ ಪಕ್ಷ, ಡಿಎಂಕೆ, ಶಿವಸೇನೆ -ಯುಬಿಟಿ, ಸಿಪಿಐ-ಎಂ ಮತ್ತು ಇತರರು ಸೇರಿದಂತೆ ವಿರೋಧ ಪಕ್ಷಗಳು ಮಸೂದೆಗಳನ್ನು ಮಂಡಿಸುವುದನ್ನು ವಿರೋಧಿಸಿ, ಇದು ಸಂವಿಧಾನದ ಮೂಲ ರಚನೆಯ ಮೇಲಿನ ದಾಳಿ ಎಂದು ಬಣ್ಣಿಸಿದವು ಹಾಗೂ ಮಸೂದೆಗಳನ್ನು ಹೆಚ್ಚಿನ ಪರಿಶೀಲನೆಗಾಗಿ ಜಂಟಿ ಸಂಸದೀಯ ಸಮಿತಿಗೆ ಕಳುಹಿಸಬೇಕು ಎಂದು ಒತ್ತಾಯಿಸಿದರು.

ಹೆಚ್ಚಿನ ಮಾಹಿತಿ ನಮ್ಮ ದೆಹಲಿ ಬಾತ್ಮೀದಾರಿಂದ

ಧ್ವನಿ: ಎಚ್.ಆರ್.ಸುಧೀಂದ್ರ

ದೇಶದಲ್ಲಿ ಒಂದು ರಾಷ್ಟ್ರ, ಒಂದು ಚುನಾವಣೆಯ ಕಲ್ಪನೆಯನ್ನು ಅನ್ವೇಷಿಸಲು ರಾಮನಾಥ್ ಕೋವಿಂದ್ ನೇತೃತ್ವದ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯು ರಾಜಕೀಯ ಪಕ್ಷಗಳು ಮತ್ತು ತಜ್ಞರೊಂದಿಗೆ ವ್ಯಾಪಕ ಚರ್ಚೆ ನಡೆಸಿದೆ ಎಂದು ಅವರು ಹೇಳಿದರು. ಇದಕ್ಕೂ ಮೊದಲು ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ಸಂಪುಟದಲ್ಲಿ ಒಂದು ರಾಷ್ಟ್ರ, ಒಂದು ಚುನಾವಣಾ ಮಸೂದೆಗಳು ಬಂದಾಗ, ಪ್ರಧಾನಿ ನರೇಂದ್ರ ಇದನ್ನು ಜಂಟಿ ಸಂಸದೀಯ ಸಮಿತಿಗೆ ಉಲ್ಲೇಖಿಸಬೇಕೆಂದು ಅಭಿಪ್ರಾಯಪಟ್ಟಿದ್ದರು ಎಂದು ತಿಳಿಸಿದರು. ಕಾಂಗ್ರೆಸ್‌ನ ಮನೀಶ್ ತಿವಾರಿ ಮಾತನಾಡಿ, ಈ ಮಸೂದೆಗಳು ಸಂವಿಧಾನದ ಮೂಲ ರಚನೆಯ ವಿರುದ್ಧವಾಗಿದ್ದು, ಈ ಮಸೂದೆಗಳನ್ನು ಹಿಂಪಡೆಯಬೇಕು ಎಂದು ಹೇಳಿದರು. ಇದೇ ಅಭಿಪ್ರಾಯವನ್ನು ವ್ಯಕ್ತಪಡಿಸಿದ ಟಿಎಂಸಿ ಸಂಸದ ಕಲ್ಯಾಣ್ ಬ್ಯಾನರ್ಜಿ, ಈ ಮಸೂದೆಗಳು ರಾಜ್ಯ ವಿಧಾನಸಭೆಗಳ ಸ್ವಾಯತ್ತತೆಯನ್ನು ಕಸಿದುಕೊಳ್ಳುತ್ತವೆ ಎಂದು ಹೇಳಿದರು.

<><*<><>*><>

ರೈತರ ಆದಾಯ ಹೆಚ್ಚಿಸಲು ಸರ್ಕಾರ ಆರು ಅಂಶಗಳ ಕಾರ್ಯತಂತ್ರವನ್ನು ಸಿದ್ಧಪಡಿಸಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ನೀಡಿದ ಲಿಖಿತ ಉತ್ತರದಲ್ಲಿ ಅವರು, ೨೦೦೨-೦೩ ರಲ್ಲಿ ತಿಂಗಳಿಗೆ ಎರಡು ಸಾವಿರ ೧೧೫ ರೂಪಾಯಿ ಇದ್ದ ರೈತರ ಆದಾಯವನ್ನು ೨೦೧೮-೧೯ ರಲ್ಲಿ ತಿಂಗಳಿಗೆ ಹತ್ತು ಸಾವಿರದ ೨೧೮ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಉತ್ಪಾದನೆಯನ್ನು ಹೆಚ್ಚಿಸುವುದು, ಉತ್ಪಾದನಾ ವೆಚ್ಚದಲ್ಲಿ ಕಡಿತ, ಉತ್ಪನ್ನಗಳಿಗೆ ನ್ಯಾಯಯುತವಾದ ಕನಿಷ್ಠ ಬೆಲೆಯ ಖಾತ್ರಿ, ನೈಸರ್ಗಿಕ ವಿಕೋಪಗಳಿಂದ ಉಂಟಾದ ನಷ್ಟವನ್ನು ಸರಿದೂಗಿಸುವುದು, ಕೃಷಿಯ ವೈವಿಧ್ಯೀಕರಣ ಮತ್ತು ನೈಸರ್ಗಿಕ ಮತ್ತು ಸಾವಯವ ಕೃಷಿಯನ್ನು ಉತ್ತೇಜಿಸುವುದು ಸರ್ಕಾರದ ಆರು ಅಂಶಗಳ ಕಾರ್ಯತಂತ್ರದಲ್ಲಿ ಒಳಗೊಂಡಿದೆ ಎಂದು ಸಚಿವರು ಹೇಳಿದರು.

<><*<><>*><>

ರಾಷ್ಟ್ರವ್ಯಾಪಿ ಫಿಟ್ ಇಂಡಿಯಾ ಅಭಿಯಾನದ ಭಾಗವಾಗಿ ದೆಹಲಿಯಲ್ಲಿಂದು ಫಿಟ್ ಇಂಡಿಯಾ ಸೈಕ್ಲಿಂಗ್ ಮಂಗಳವಾರ ಅಭಿಯಾನವನ್ನು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ ಉದ್ಘಾಟಿಸಿದರು. ಈ ಸಂದರ್ಭವನ್ನು ಗುರುತಿಸಲು, ಭಾರತೀಯ ಕ್ರೀಡಾ ಪ್ರಾಧಿಕಾರ ಎನ್‌ಎಸ್‌ಎಸ್‌ಐ ಬೆಂಗಳೂರು, ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಾದ್ಯಂತ ೧೫ ವಿವಿಧ ಸ್ಥಳಗಳಲ್ಲಿ ಸೈಕ್ಲಿಂಗ್ ಕಾರ್ಯಕ್ರಮಗಳನ್ನು ಆಯೋಜಿಸಿದೆ. ಈ ರಾಷ್ಟ್ರವ್ಯಾಪಿ ಅಭಿಯಾನವನ್ನು ವಿಶೇಷವಾಗಿ ಕರ್ನಾಟಕದ ಮಡಿಕೇರಿ, ಧಾರವಾಡ, ಮೈಸೂರು ಹಾಗೂ ಬೆಂಗಳೂರಿನಲ್ಲಿ ಆಯೋಜಿಸಲಾಗಿತ್ತು.

**<><*<><>*><>**

ಮುಂಬೈನಲ್ಲಿ ನಡೆಯುತ್ತಿರುವ ಮೂರು ಪಂದ್ಯಗಳ ಮಹಿಳಾ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿಂದು ಭಾರತ ಮತ್ತು ವೆಸ್ಟ್‌ಇಂಡೀಸ್ ವನಿತೆಯರ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ವೆಸ್ಟ್‌ಇಂಡೀಸ್ ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ. ಇತ್ತೀಚಿನ ವರದಿಯಂತೆ ಭಾರತ, ೬.೪ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೪೧ ರನ್ ಮಾಡಿದೆ. ಕಳೆದ ಭಾನುವಾರ ನಡೆದ ಸರಣಿಯ ಮೊದಲ ಪಂದ್ಯವನ್ನು ಭಾರತ ಗೆದ್ದುಕೊಂಡಿತ್ತು.

**<><*<><>*><>**

ಐಸಿಸಿ ಮಹಿಳಾ ಆಟಗಾರರ ನೂತನ ರ‍್ಯಾಂಕಿಂಗ್ ಬಿಡುಗಡೆಯಾಗಿದ್ದು, ಭಾರತ ಸ್ಮೃತಿ ಮಂದಾನ ಅಂತಾರಾಷ್ಟ್ರೀಯ ಏಕದಿನ ಮಾದರಿಯ ಬ್ಯಾಟಿಂಗ್ ರ‍್ಯಾಕಿಂಗ್‌ನಲ್ಲಿ ೨ನೇ ಸ್ಥಾನಕ್ಕೇರಿದ್ದು, ಅಂತಾರಾಷ್ಟ್ರೀಯ ಟಿ-೨೦ ಮಾದರಿಯಲ್ಲಿ ೩ನೇ ಸ್ಥಾನಕ್ಕೇರಿದ್ದಾರೆ. ಇವರ ಜೊತೆಗೆ ಭಾರತೀಯ ತಂಡದ ನಾಯಕಿ ಹರ್ಮನ್‌ಪ್ರೀತ್ ಕೌರ್ ಅಗ್ರ ೧೦ ಆಟಗಾರರಲ್ಲಿ ಸ್ಥಾನ ಪಡೆದಿದ್ದಾರೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**